ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ  ದಿನಾಂಕ : DATE : 5/7/19

ಶಾಸಕ ಆನಂದ ಸಿಂಗ್, ಸತೀಶ್ ಜಾರಕಿಹೊಳಿ ವಿರುದ್ಧ ಸ್ಪೀಕರ್ ರಮೇಶ್ ಕುಮಾರ್ ಅಸಮಾಧಾನ

# ರಾಜೀನಾಮೆ ಗೌರವಸ್ಥರ ಕೆಲಸವಲ್ಲ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಜನರಿಂದ ಆಯ್ಕೆಗೊಂಡು ಕೆಲಸ ಮಾಡದೇ, ರಾಜೀನಾಮೆ ನೀಡುವುದು ಜನಪ್ರತಿನಿಧಿಗಳಿಗೆ ಗೌರವ ತರುವ ಕೆಲಸವಲ್ಲ ಎಂದು ಸಭಾಧ್ಯಕ್ಷ ರಮೇಶ್ ಕುಮಾರ್ ಅಸಮಾಧಾನ ಹೊರಹಾಕಿದರು.

ವಿಧಾನಸೌಧದಲ್ಲಿ ಮಾತನಾಡಿದ ಅವರು, ಮಾಡುವುದಕ್ಕೆ ಕೆಲಸ ಇಲ್ಲದವರು ರಾಜೀನಾಮೆ ಕೊಡುತ್ತೇವೆ ಎನ್ನುತ್ತಾರೆ. ಇದು ಗೌರವಸ್ಥರ ಮಾಡುವ ಕೆಲಸವಲ್ಲ ಎಂದು ಶಾಸಕ ರಮೇಶ್ ಜಾರಕಿಹೊಳಿ ಹಾಗೂ ಆನಂದ್ ಸಿಂಗ್ ನಡೆಯನ್ನು ಟೀಕಿಸಿದರು. ಶಾಸಕರ ರಾಜೀನಾಮೆ ಎನ್ನುವುದು ಕೇವಲ ವದಂತಿ. ಯಾರಾದರೂ ಬಂದು ರಾಜೀನಾಮೆ ಕೊಡುತ್ತಾರೆ ಎಂದು ನಾನು ಪ್ರತಿ ದಿನ 100 ಕಿ.ಮೀ ದೂರದಿಂದ ಕಚೇರಿಗೆ ಬಂದು ಕಾಯುತ್ತಿದ್ದೇನೆ. ಆದರೆ ಯಾರೂ ರಾಜೀನಾಮೆ ನೀಡಲು ಬರುತ್ತಿಲ್ಲ. ಯಾವ ಶಾಸಕರು ಬಂದು ಸಮಯಾವಕಾಶ ಕೇಳುತ್ತಿಲ್ಲ. ಮಾಧ್ಯಮದವರೇ ಬಂದು ಸಮಯಾವಕಾಶ ಕೇಳುತ್ತಿದ್ದಾರೆ ಎಂದರು.

ವ್ಯಾಪಾರಸ್ಥರು ವ್ಯಾಪಾರ ಮಾಡುತ್ತಾರೆ. ರಾಜಕಾರಣದಲ್ಲಿ ವ್ಯಾಪಾರ ಮಾಡಬಾರದು, ಗುಟ್ಟು-ಗುಮಾನಿ ಇರಬಾರದು, ಗುಟ್ಟಾಗಿ ಏನೇ ಮಾಡಿದರೂ ಅದು ವ್ಯಾಪಾರ ಆಗುತ್ತದೆ. ತಾವು ಪ್ರಜಾತಾಂತ್ರಿಕ ವ್ಯವಸ್ಥೆಯನ್ವಯ ಕೆಲಸ ಮಾಡುತ್ತಿದ್ದೇನೆ. ರಾಜೀನಾಮೆ ಕೊಡುತ್ತೇನೆ ಎಂದು ಹೇಳುವವರನ್ನು ನನ್ನ ಬಳಿ ಕರೆದುಕೊಂಡು ಬನ್ನಿ, ಅವರಿಗೆ ಬುದ್ಧಿಮಾತು ಹೇಳಿ ಕಳುಹಿಸುತ್ತೇನೆ ಎಂದು ಹೇಳಿದರು.

ಉಪ ಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ್ ಹಾಗೂ ಕೆಪಿಸಿಸಿ ಕಾರ್ಯಾಧ್ಯಕ್ಷ ಈಶ್ವರ್ ಖಂಡ್ರೆ ಭೇಟಿ ಬಗ್ಗೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್ ನಾಯಕರು ಆನಂದ್ ಸಿಂಗ್ ವಿರುದ್ಧ ಯಾವುದೇ ದೂರು ನೀಡಲು ತಮ್ಮನ್ನು ಭೇಟಿ ಮಾಡಿರಲಿಲ್ಲ. ಯಾರೂ ನಮಗೆ ದೂರು ನೀಡಿಲ್ಲ, ಮಳೆಗಾಲದ ಅಧಿವೇಶನ ಬಗ್ಗೆ ಔಪಚಾರಿಕವಾಗಿ ತಮಗೆ ತಿಳಿಸಲು ಸಾಧ್ಯವಾಗಿಲ್ಲ ಎಂದು ಹೇಳಲು ಬಂದಿದ್ದರು. ಆನಂದ್ ಸಿಂಗ್ ರಾಜೀನಾಮೆ ಕೊಟ್ಟಿದ್ದಾರೆಯೇ ಎಂದು ಕೇಳಿದರು, ಹೌದು ಎಂದು ಹೇಳಿದೆ ಎಂದರು.

> ಜುಲೈ 12ರಿಂದ ವಿಧಾನಮಂಡಲದ ಮುಂಗಾರು ಅಧಿವೇಶನ ಆರಂಭವಾಗಲಿದ್ದು, ಹೀಗಾಗಿ ಅಧಿವೇಶನ ಬಗ್ಗೆ ಸ್ಪೀಕರ್ ಜತೆ ಚರ್ಚೆ ಮಾಡಿದ್ದೇನೆ. ಅಧಿವೇಶನ ನಡೆಸಲು ರಾಜ್ಯಪಾಲರಿಂದ ಅನುಮತಿ ಸಿಕ್ಕಿದೆ. ಹೀಗಾಗಿ ಈ ಬಗ್ಗೆ ಮಾತ್ರ ಚರ್ಚಿಸಿದ್ದು, ಬೇರೆ ಯಾವುದೇ ವಿಷಯಗಳ ಬಗ್ಗೆ ಚರ್ಚೆಯಾಗಿಲ್ಲ.
>
> **- ಡಾ. ಜಿ.ಪರಮೇಶ್ವರ್,** ಉಪಮುಖ್ಯಮಂತ್ರಿ

> ನಾನು ವಿಧಾನಸಭೆ ಸಭಾಧ್ಯಕ್ಷ. ನನಗೆ ಕೆಲವೊಂದು ನಿರ್ಬಂಧಗಳಿವೆ. ಆಪರೇಷನ್ ಕಮಲ ಆಡಿಯೊ ಬಗ್ಗೆ ಎಸ್ಐಟಿ ರಚನೆ ವಿಳಂಬದ ಕುರಿತು ನಾನು ಮುಕ್ತವಾಗಿ ಮಾತನಾಡಲು ಸಾಧ್ಯವಿಲ್ಲ. ಈ ಬಗ್ಗೆ ಸೂಕ್ತ ಸಂದರ್ಭ, ಸೂಕ್ತ ವೇದಿಕೆಯಲ್ಲಿ ಮಾತನಾಡುತ್ತೇನೆ.
>
> **-ಆರ್.ರಮೇಶ್‌ಕುಮಾರ್,** ಸ್ಪೀಕರ್

## ರಾಜೀನಾಮೆ ಅಂಗೀಕರಿಸದಂತೆ ಮನವಿ

ಉಪ ಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ ಹಾಗೂ ಕೆಪಿಸಿಸಿ ಕಾರ್ಯಾಧ್ಯಕ್ಷ ಈಶ್ವರ್ ಖಂಡ್ರೆ, ವಿಧಾನಸೌಧದಲ್ಲಿ ಸ್ಪೀಕರ್ ರಮೇಶ್ ಕುಮಾರ್‌ನ್ನು ಭೇಟಿ ಕಾಂಗ್ರೆಸ್ ಶಾಸಕ ಆನಂದ್ ಸಿಂಗ್ ರಾಜೀನಾಮೆ ಅಂಗೀಕರಿಸದಂತೆ ಮನವಿ ಮಾಡಿದರು. ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿರುವ ಆನಂದ್ ಸಿಂಗ್ ವಿರುದ್ಧ ಕಾಂಗ್ರೆಸ್ ಕಾರ್ಯಾಧ್ಯಕ್ಷ ಹಾಗೂ ಸಚಿವ ಶಿವಾನಂದ ಪಾಟೀಲ್ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಶಾಸಕರ ವಿರುದ್ಧ ದೂರು ಕೂಡ ಸಲ್ಲಿಸಿದ್ದರೆ ಎನ್ನಲಾಗಿದೆ. ಸ್ಪೀಕರ್ ಭೇಟಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಈಶ್ವರ್ ಖಂಡ್ರೆ, ಪಕ್ಷದ ಶಾಸಕ ಆನಂದ್ ಸಿಂಗ್ ತಮ್ಮ ವಿಧಾನಸಭಾ ಸದಸ್ಯ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿದ್ದಾರೆ. ಆದರೆ ಪಕ್ಷಕ್ಕೆ ಅವರು ಯಾವುದೇ ರಾಜೀನಾಮೆ ಪತ್ರ ಕೊಟ್ಟಿಲ್ಲ. ವಿಜಯನಗರ ಕ್ಷೇತ್ರದಿಂದ ಆಯ್ಕೆ ಆಗಿದ್ದರು. ನಾವು ಕಳೆದ ಚುನಾವಣೆ ವೇಳೆ ಅವರಿಗೆ ಪಕ್ಷದಿಂದ 'ಬಿ ಫಾರಂ' ಕೊಟ್ಟಿದ್ದೆವು. ಅನಂತರ ಅವರು ಕಾಂಗ್ರೆಸ್‌ನಿಂದ ಗೆದ್ದಿದ್ದಾರೆ. ನಾವು ಈಗ ಅವರ ವಿರುದ್ಧ ಸ್ಪೀಕರ್‌ಗೆ ದೂರು ಕೊಟ್ಟಿಲ್ಲ. ಆದರೆ ಆನಂದ್ ಸಿಂಗ್ ಯಾಕೆ ರಾಜೀನಾಮೆ ಕೊಟ್ಟಿದ್ದಾರೆ ಎಂಬ ಮಾಹಿತಿ ಪಡೆದಿದ್ದೇವೆ ಅಷ್ಟೇ ಎಂದರು.



3